ಮಾಗಡಿ-ಬೆಂಗಳೂರು ಸಾರಿಗೆ ವ್ಯವಸ್ಥೆ.

119(270) ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ) :— ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೆಂಗಳೂರಿನಿಂದ ಮಾಗಡಿಗೆ ಸಂಚರಿಸುತ್ತಿರುವ ಬಿ.ಎಂ.ಟಿ.ಸಿ. ಹಾಗೂ ಕೆ.ಎಸ್.ಆರ್.ಟಿ.ಸಿ. ಬಸ್‌ಗಳ ಸಂಖ್ಯೆ ಎಷ್ಟು; ಸಾಕಷ್ಟು ಪ್ರಮಾಣದಲ್ಲಿ ಸಾರಿಗೆ ಸಂಸ್ಥೆಯ ಬಸ್ ಸಂಚಾರವಿಲ್ಲದೆ ಮಾಗಡಿ- ಬೆಂಗಳೂರು ಸಾರಿಗೆ ವ್ಯವಸ್ಥೆಯಲ್ಲಿ ಸಮರ್ಪಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮವೇನು?

ಇ) ಶೃಂಗೇರಿ, ಮಂಗಳೂರು, ಧರ್ಮಸ್ಥಳ ಹೊರನಾಡು ಮತ್ತು ಚಿಕ್ಕಮಗಳೂರು ಮುಂತಾದ ದೂರದ ಪ್ರದೇಶಗಳಿಗೆ ನೆಲಮಂಗಲ ಮಾರ್ಗವಾಗಿ ಸಂಚರಿಸುವಂತೆ ಮಾಡುವ ಯೋಜನೆ ಸರ್ಕಾರಕ್ಕಿದೆಯೆ; ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಯಾವಾಗ ಕ್ರಮ ಕೈಗೊಳ್ಳುವುದು?

ಶ್ರೀ ಬಿ.ಎನ್. ಬಚ್ಚೇಗೌಡ (ಸಾರಿಗೆ ಸಚಿವರು) :—

ಅ) ಬಂದಿದೆ.

ಆ) ಬೆಂಗಳೂರು-ಮಾಗಡಿ ಮಾರ್ಗವು ರಾಷ್ಟ್ರೀಕೃತವಲ್ಲದ ವಲಯದಲ್ಲಿ ಇರುತ್ತದೆ. ಈ ವಲಯದಲ್ಲಿ ಖಾಸಗಿ ಬಸ್ ಮಾಲೀಕರು ಪ್ರಯಾಣಿಕರ ಒತ್ತಡಕ್ಕೆ ಅನುಗಣವಾಗಿ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಿರುತ್ತಾರೆ. ಪ್ರಯಾಣಿಕರ ಹಿತದೃಷ್ಟಿಯಿಂದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ವತಿಯಿಂದ ಬೆಂಗಳೂರು-ಮಾಗಡಿ ನಡುವೆ ಪ್ರತ್ಯೇಕ 8 ಸಿಂಗಲ್ ಟ್ರಿಪ್‌ಗಳನ್ನು ಹಾಗೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು 7 ಬಸ್ಸುಗಳಿಂದ ಒಟ್ಟು 38 ಏಕಮುಖ ಸುತ್ತುವಳಿಯ ಕಾರ್ಯಾಚರಣೆ ಮಾಡಲಾಗುತ್ತಿವೆ.

ಇ) ಇಲ್ಲ.

ಮಾಗಡಿ ಕ್ಷೇತ್ರದಲ್ಲಿ ಅಂಗನವಾಡಿ ಕಟ್ಟಡಗಳು.

120(271) ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ) :— ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು ಮಾನ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) 1996-97, 97-98 ಮತ್ತು 1998-99 ನೇ ಸಾಲಿನವರೆಗೆ ಮಾಗಡಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಎಷ್ಟು ಅಂಗನವಾಡಿ ಕಟ್ಟಡಗಳನ್ನು ಕಟ್ಟಲಾಗಿದೆ. ಅವುಗಳು ಯಾವುವು ಇವುಗಳಿಗೆ ವ್ಯಯಿಸಿದ ಹಣವೆಷ್ಟು; (ವಿವರ ನೀಡುವುದು)

ಆ) ಮಾಗಡಿ ಕ್ಷೇತ್ರದ ಹಲವಾರು ಅಂಗನವಾಡಿ ಕೇಂದ್ರಗಳಿಗೆ ಕಟ್ಟಡಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಇವುಗಳ ಸಂಖ್ಯೆ ಎಷ್ಟು; ಈ ಬಗ್ಗೆ ಸರ್ಕಾರವು ಕೈಗೊಳ್ಳಲಿರುವ ಕ್ರಮಗಳೇನು?